ದಿನಾಂಕ: 16.03.2022 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಶೇಖರ್‌ನಾಯಕ್, ಎಇ, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಕೆ. ಉಮಾಶಂಕರ್, ಶಾರದಾ ಕಾಲೊನಿ ಸದಸ್ಯರು
6. ಶ್ರೀ ಎಂ. ರವೀಂದ್ರ, ಸದಸ್ಯರು
7. ಶ್ರೀ ರಮೇಶ್, ಸದಸ್ಯರು,

ದಿನಾಂಕ: 01.02.2022 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 16.03.2022 ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಶ್ರೀರಾಮನಗರ, ಮೀನಾಕ್ಷಿನಗರ, ಗಾಡಿಮುದ್ದಣ್ಣ ರಸ್ತೆ, ಮತ್ತು ಶಾರದಾಕಾಲೋನಿ ವ್ಯಾಪ್ತಿಯಲ್ಲಿ ಬರುವ ರಸ್ತೆ ಕತ್ತರಿಸಿರುವ ಭಾಗವನ್ನು ಸರಿಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಗಿರುತದೆ. ಅದನ್ನು ಹಂತಹಂತವಾಗಿ ಹೆಚ್.ಎಂ.ಪಿ. ಟ್ರಾಫಿಸೆಲ್, ಸಂಚಾರಿ ಕೋಶ, ಕೇಂದ್ರ ಕಛೇರಿಯಿಂದ ಮಿಶ್ರಣವನ್ನು ತರಿಸಿಕೊಂಡು ಹಂತ ಹಂತವಾಗಿ ಮುಚ್ಚಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

2. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕಂದಾಯ ಪರಿವೀಕ್ಷಕರಿಗೆ ವಾರ್ಡಿನಲ್ಲಿ ಬಾಕಿ ಇರುವ ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ವಸೂಲಿ ಮಾಡಿ ಬಿ.ಬಿ.ಎಂ.ಪಿ.ಯ ತೆರಿಗೆಯನ್ನು ಹೆಚ್ಚಿಸಬೇಕೆಂದು ತಿಳಿಸಿದರು.

3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಹಾಕದಂತೆ ಮತ್ತು ಕಸವನ್ನು ರಸ್ತೆಯಲ್ಲಿ ಹಾಕದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಮಾರ್ಷಲ್ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಕ್ರಮ ವಹಿಸಬೇಕೆಂದು ಸಭೆಗೆ ತಿಳಿಸಿದರು.

4. ವಾರ್ಡ್ ನಂ. 101ರ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಡೆಬ್ರಿಸ್‌ಗಳನ್ನು ತೆರವುಗೊಳಿಸುವಂತೆ ಸೂಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಸಹಾಯಕ ಅಭಿಯಂತರರು ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದರಿಂದ ತುರ್ತಾಗಿ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ ರವರು ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳುವುದಾಗಿ ಹಾಗೂ ನೋಡಲ್ ಅಧಿಕಾರಿಗಳ ಸಮ್ಮುಖದಲ್ಲಿ ಚರ್ಚಿಸಿದಂತೆ, ಮಾನ್ಯ ಕಾರ್ಯಪಾಲಕ ಅಭಿಯಂತರರು [ರಾಜಾಜಿನಗರ] ರವರು ದೂರವಾಣಿ ಮುಖಾಂತರ ಸಹ ಚರ್ಚಿಸಲಾಗಿರುತ್ತದೆ.

Scanned by CamScanner

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner